1565 (2318) ಶ್ರೀ ಬಾಲರಾಜ್ ಎಸ್ (ಕೊಳ್ಳೆಗಾಲ) – ಮಾನ್ಯ ಜಲ ಸಂಪನ್ಮೂಲ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕಾವೇರಿ ನೀರಾವರಿ ನಿಗಮದ ನಂ 2 ವಿಭಾಗದಲ್ಲಿ ಕಾಮಗಾರಿಗಳು ಸಮರ್ಪಕವಾಗಿ ನಡೆಯುತ್ತಿದೆಯೇ,

ಆ) ಹಾಗಿದ್ದಲ್ಲಿ, ಕಾಮಗಾರಿಗಳ ನಿರ್ವಹಣೆಯಲ್ಲಿ ನಿಯಮಾನುಸಾರ ಇಲ್ಲದೇ ಲೋಪ ಇರುವುದು ಸರ್ಕಾರದ ಗಮನದಲ್ಲಿ ಇದೆಯೇ,

ಇ) ಇದ್ದಲ್ಲಿ ತೆಗೆದುಕೊಂಡಿರುವ ಕ್ರಮಗಳೇನು (ವಿವರ ನೀಡುವುದು)?

ಶ್ರೀ ಕೆ ಎಸ್ ಈಶ್ವರಪ್ಪ (ಜಲ ಸಂಪನ್ಮೂಲ ಸಚಿವರು)

ಅ) ಸಮರ್ಪಕವಾಗಿ ನಡೆಯುತ್ತಿದೆ

ಆ) ಮತ್ತು ಇ) ಮೇಲಿನ ಉತ್ತರದಿಂದ ಈ ಪ್ರಶ್ನೆ ಉದ್ಭವಿಸುವುದಿಲ್ಲ

1568 (2227) ಶ್ರೀ ಬಸವರಾಜು ಹೆಚ್ ಡಿ (ವಿರಾಜಪೇಟೆ) – ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಮೂಲಕ ಕಳೆದ ಮೂರು ವರ್ಷಗಳಿಂದ ಕ್ಷೇತ್ರವಾರು ಬಿಡುಗಡೆ ಮಾಡಿದ ಹಣವೆಷ್ಟು, (ಯೋಜನೆಗಳವಾರು ಹಣದ ವಿವರಗಳನ್ನು ಒದಗಿಸುವುದು)?

ಶ್ರೀ ಸಿ ಎಂ ಉದಾಸಿ (ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು)

ಅ) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖಾ ವತಿಯಿಂದ ಅನುದಾನವನ್ನು ಕ್ಷೇತ್ರವಾರು ಬಿಡುಗಡೆ ಮಾಡಲಾಗುತ್ತಿಲ್ಲ ಜಿಲ್ಲಾ ಪಂಚಾಯತಿ, ತಾಲ್ಲೂಕು ಪಂಚಾಯತಿ ಹಾಗೂ ಗ್ರಾಮ ಪಂಚಾಯತಿಗಳ ವಿವಿಧ ಕಾರ್ಯಕ್ರಮಗಳಿಗೆ ಅವುಗಳ ಮಾರ್ಗಸೂಚಿಗಳನ್ವಯ ವಾರ್ಷಿಕ ಅನುದಾನವನ್ನು ಹಂಚಿಕೆ ಮಾಡಿ ಬಿಡುಗಡೆಗೊಳಿಸಲಾಗುತ್ತಿದೆ